ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	1199
ಸದಸ್ಯರ ಹೆಸರು	:	ಶ್ರೀ ಹೆಚ್.ಎಂ. ರಮೇಶ್ ಗೌಡ (ವಿಧಾನಸಭೆಯಿಂದ ಚುನಾಯಿತರಾದವರು)
ಉತ್ತರಿಸಬೇಕಾದ ದಿನಾಂಕ	:	07-03-2022
ಉತ್ತರಿಸುವ ಸಚಿವರು	:	ಮಾನ್ಯ ಇಂಧನ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು

ಕ್ರ. ಸಂ	ಪ್ರಶ್ನೆ	ಉತ್ತರ
ಅ)	ರಾಜ್ಯದಲ್ಲಿ ಸರ್ಕಾರಿ ಕಛೇರಿಗಳು ಸೇರಿದಂತೆ, ಇತರೆ ಖಾಸಗಿ ಸಂಸ್ಥೆಗಳು ನಾಮಫಲಕಗಳಲ್ಲಿ ಕನ್ನಡವನ್ನು ತಪ್ಪಾಗಿ ಅಥವಾ ಅಪಾರ್ಥವಾಗಿ ಬರೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಶುದ್ಧ ಕನ್ನಡ ಬಳಕೆಗೆ ಯಾವ ಕ್ರಮಗಳನ್ನು ಕೈಗೊಳ್ಳಲಾಗಿದೆ;	ಕನ್ನಡ ಅಭಿವೃದ್ಧಿ ಪ್ರಾಧಿಕಾರವು ಕನ್ನಡ ನಾಡು-ನುಡಿ, ನೆಲ-ಜಲ, ಭಾಷೆ-ಸಂಸ್ಕೃತಿಗಾಗಿ ಶ್ರಮಿಸುತ್ತಿರುವ ಕರ್ನಾಟಕ ಸರ್ಕಾರದ ಶಾಸನಬದ್ಧ ಸಂಸ್ಥೆಯಾಗಿದೆ. 1963ರ ಭಾಷಾ ಅಧಿನಿಯಮ ಅನುಷ್ಠಾನದ ಮೇಲುಸ್ತುವಾರಿಗಾಗಿ ಕಾಯ್ದೆಯಲ್ಲಿ ಪ್ರದತ್ತವಾದ ಅಧಿಕಾರ ನೀಡಲಾಗಿದೆ. ರಾಜ್ಯ ಸರ್ಕಾರದ ಭಾಷಾ ನೀತಿ ಹಾಗೂ ಕಾಲಕಾಲಕ್ಕೆ ಸರ್ಕಾರವು ಹೊರಡಿಸುವ ಆದೇಶಗಳು-ಸುತ್ತೋಲೆಗಳನ್ವಯ ಪ್ರಾಧಿಕಾರ ಕನ್ನಡ ಅನುಷ್ಠಾನಕ್ಕೆ ಸಂಬಂಧಪಟ್ಟ ಹಾಗೆ ಕಾರ್ಯನಿರ್ವಹಿಸುತ್ತಿರುತ್ತದೆ. ಕನ್ನಡ ಭಾಷೆಯನ್ನು ರಾಜ್ಯದ ಆಡಳಿತ ಭಾಷೆಯಾಗಿ ಕಡ್ಡಾಯವಾಗಿ ಎಲ್ಲ ಹಂತದಲ್ಲೂ ತರುವ ಬಗ್ಗೆ ಸರ್ಕಾರದ ಸುತ್ತೋಲೆ ಸಂಖ್ಯೆ: ಡಿಪಿಎಆರ್:8:ಪಿಓಎಲ್:83, ಬೆಂಗಳೂರು, ದಿನಾಂಕ:10.02.1982ರಂತೆ ಕಡತಗಳ ಮೇಲೆ ಬರೆಯುವ ಟಿಪ್ಪಣಿಗಳು, ಪ್ರಕಟಣೆಗಳು, ಅರ್ಜಿ ನಮೂನೆಗಳು, ನೋಟಿಸುಗಳು, ಪರವಾನಿಗೆಗಳು, ಬಿಲ್ಲುಗಳು, ಕಛೇರಿ ಕಾಗದದ ತಲೆಬರಹಗಳು ಹಾಗೂ ಕಛೇರಿ ಹಾಗೂ ಬೀದಿ ಫಲಕಗಳು ಸೇರಿದಂತೆ ಆಡಳಿತದ ಎಲ್ಲಾ ಹಂತಗಳಲ್ಲಿ ಕನ್ನಡ ಬಳಸುವಂತೆ ಸುತ್ತೋಲೆ ಹೊರಡಿಸಲಾಗಿರುತ್ತದೆ.
ಆ)	ಸರ್ಕಾರಿ ಪತ್ರ ವ್ಯವಹಾರಗಳಲ್ಲೇ ಕಾಗುಣಿತದ ತಪ್ಪುಗಳಾಗುತ್ತಿದ್ದು, ಇಂತಹ ತಪ್ಪುಗಳನ್ನು ತಡೆಯಲು ಸರ್ಕಾರದ ವ್ಯವಹಾರಕ್ಕೆ ಶುದ್ಧ ಕನ್ನಡ ಬಳಕೆ ಮಾಡಲು ಯಾವುದಾದರೂ ನೀತಿಯನ್ನು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ರೂಪಿಸಿದೆಯೇ; (ರೂಪಿಸಿದ್ದಲ್ಲಿ ವಿವರ ನೀಡುವುದು)	ಸರ್ಕಾರದ ವ್ಯವಹಾರಕ್ಕೆ ಶುದ್ಧ ಕನ್ನಡ ಬಳಕೆ ಮಾಡಲು ನೀತಿಯನ್ನು ರೂಪಿಸುವುದು ಸರ್ಕಾರದ ನೀತಿಯ ಪ್ರಶ್ನೆಯಾಗಿರುತ್ತದೆ. ಉಳಿದಂತೆ ಕನ್ನಡ ಬಳಕೆಗೆ ಅನುಕೂಲವಾದ ತರಬೇತಿ ಕಾರ್ಯಕ್ರಮಗಳನ್ನು, ಶಿಬಿರಗಳನ್ನು, ಪ್ರದರ್ಶನಗಳನ್ನು, ಕಮ್ಮಟ ಗೋಷ್ಠಿ, ಕನ್ನಡ ಸಂಬಂಧ ಕೈಪಿಡಿಗಳನ್ನು ಮುದ್ರಿಸುವುದು ಮತ್ತು ವಿಚಾರ ಸಂಕಿರಣಗಳನ್ನು ಆಯೋಜನೆಯನ್ನು ಕನ್ನಡ ಅಭಿವೃದ್ಧಿ ಪ್ರಾಧಿಕಾರ ನಿರ್ವಹಿಸುತ್ತಿದೆ.

---2/-

ಇ)	ಕನ್ನಡದ ಶುದ್ಧ ಬರವಣಿಗೆ ಹಾಗೂ ವ್ಯವಹಾರಕ್ಕೆ ಇಲಾಖೆಯಿಂದ ಯಾವ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ? (ಸಂಪೂರ್ಣ ಮಾಹಿತಿ ನೀಡುವುದು)	ಕನ್ನಡವನ್ನು ಆಡಳಿತ ಭಾಷೆಯನ್ನಾಗಿ ಜಾರಿಗೆ ತರುವಲ್ಲಿ ಇರುವ ಅಡಚಣೆಗಳನ್ನು ಗಮನಿಸಿ ಅವುಗಳ ನಿವಾರಣೆಗೆ ಸೂಕ್ತ ಕ್ರಮಗಳನ್ನು ಕೈಗೊಳ್ಳುವುದರ ಮೂಲಕ ಕನ್ನಡ ಬಳಕೆಗೆ ಅನುಕೂಲವಾದ ತರಬೇತಿ ಕಾರ್ಯಕ್ರಮಗಳನ್ನು, ಶಿಬಿರಗಳನ್ನು, ಪ್ರದರ್ಶನಗಳನ್ನು ಮತ್ತು ವಿಚಾರ ಸಂಕಿರಣಗಳನ್ನು ಆಯೋಜನೆ ಮಾಡುವುದು, ಕನ್ನಡ ಅಭಿವೃದ್ಧಿಗೆ ಸಂಬಂಧಿಸಿದ ಉಪಯುಕ್ತ ಪ್ರಕಟಣೆಗಳನ್ನು ಪ್ರಕಟಿಸುವುದು, ಆಡಳಿತ ಪೂರಕ ಸಾಹಿತ್ಯದ ರಚನೆ, ಪರಿಷ್ಕರಣೆ, ಮುದ್ರಣ ಮತ್ತು ಕನ್ನಡೇತರರಿಗೆ ಕನ್ನಡ ಕಲಿಕೆ ಕನ್ನಡ ಕಲಿಸಲು ಕನ್ನಡ ಕಲಿಕಾ ಕೇಂದ್ರಗಳ ಮೂಲಕ ಕನ್ನಡ ಭಾಷೆ ಬೆಳೆಸುವ ಕಾರ್ಯಕ್ರಮಗಳನ್ನು ನಿರಂತರವಾಗಿ ನಡೆಸುತ್ತ ಬಂದಿದೆ ಹಾಗೂ ರಾಜ್ಯದಲ್ಲಿ ಹೆಚ್ಚು ಜನಸಂಪರ್ಕ ಹೊಂದಿರುವ ಕೇಂದ್ರ ಸರ್ಕಾರದ ಕಚೇರಿಗಳು, ಬ್ಯಾಂಕುಗಳು, ಅಂಚೆ ಕಛೇರಿಗಳು, ಮತ್ತಿತರ ಕಛೇರಿಗಳು ಮತ್ತು ಉದ್ದಿಮೆಗಳಲ್ಲಿ ಇಂದಿನ ಬಳಕೆಯಲ್ಲಿರುವ ನಮೂನೆ, ನೋಟೀಸು, ನಾಮಫಲಕಗಳಲ್ಲಿ ಕೇಂದ್ರ ಸರ್ಕಾರದ ಭಾಷಾ ನೀತಿಗೆ ಅನುಗುಣವಾಗಿ ಪ್ರಾದೇಶಿಕ ಭಾಷೆಯನ್ನು ಬಳಸಲಾಗುತ್ತಿದೆಯೇ ಎಂಬುದನ್ನು ಪರಿಶೀಲಿಸಲು ಕಛೇರಿಗಳಿಗೆ ಭೇಟಿ ನೀಡಿ ಕನ್ನಡ ಅನುಷ್ಠಾನ ಕುರಿತ ಪರಿಶೀಲನೆ ನಡೆಸಲಾಗುತ್ತಿರುತ್ತದೆ.

ಸಂಖ್ಯೆ: ಕಸಂವಾ 31 ಕೆಓಎಲ್ 2022.

(ವಿ.ಸುನಿಲ್ ಕುಮಾರ್)
ಇಂಧನ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು